# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 849(833)

ಸದಸ್ಯರ ಹೆಸರು : ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ)

ಉತ್ತರಿಸುವ ದಿನಾಂಕ : 15.12.2025.

ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು.

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಜ್ಯೋತಿ ಸಂಜೀವಿನಿ ಯೋಜನೆ ಪ್ರಾರಂಭವಾಗಿದ್ದು, ಯಾವಾಗ; ಈ ಯೋಜನೆಯ ಮಾನದಂಡಗಳೇನು; | **ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ಸಂಬಂಧಿಸಿದಂತೆ**<br>ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತ ಸದಸ್ಯರುಗಳಿಗೆ ನಗದುರಹಿತ ವೈದ್ಯಕೀಯ ಚಿಕಿತ್ಸೆ ಒದಗಿಸಲು 2014-15 ನೇ ಸಾಲಿನಿಂದ ಜ್ಯೋತಿ ಸಂಜೀವಿನಿ ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 14 ಎಸ್‌ಎಂಆರ್ 2013, ದಿನಾಂಕ:18.08.2024 ರಲ್ಲಿ ಜಾರಿಗೊಳಿಸಲಾಗಿದೆ. ಸರ್ಕಾರದ ಆದೇಶವನ್ನು **ಅನುಬಂಧ-1** ರಲ್ಲಿ ಒದಗಿಸಲಾಗಿದೆ.<br><br>ಮುಂದುವರೆದು, ಪ್ರಸ್ತುತ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 16 ಎಸ್‌ಎಂಆರ್ 2020, ದಿನಾಂಕ:23.09.2025 ರನ್ವಯ ದಿನಾಂಕ:01.10.2025 ರಿಂದ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯನ್ನು ಜಾರಿಗೊಳಿಸಿರುವುದರಿಂದ ಸದರಿ ದಿನಾಂಕದಿಂದ ಜ್ಯೋತಿ ಸಂಜೀವಿನಿ ಯೋಜನೆಯನ್ನು ಸ್ಥಗಿತಗೊಳಿಸಲಾಗಿದೆ. ಸರ್ಕಾರದ ಆದೇಶವನ್ನು **ಅನುಬಂಧ-2** ರಲ್ಲಿ ಒದಗಿಸಲಾಗಿದೆ. |
| ಆ | ಪ್ರಾರಂಭದಿಂದ ಇಲ್ಲಿಯವರೆಗೂ ಎಷ್ಟು ನೌಕರರು ಈ ಯೋಜನೆಯ ಲಾಭ ಪಡೆದಿರುತ್ತಾರೆ. (ಜಿಲ್ಲಾವಾರು ಮಾಹಿತಿ ನೀಡುವುದು); | **ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ಸಂಬಂಧಿಸಿದಂತೆ**<br>ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 14 ಎಸ್‌ಎಂಆರ್ 2013, ದಿನಾಂಕ:18.08.2024 ರಂತೆ ಸುವರ್ಣ |

| | | |
|---|---|---|
| | | ಆರೋಗ್ಯ ಸುರಕ್ಷಾ ಟ್ರಸ್ಟ್ ರವರು ಆರೋಗ್ಯ ಕಲ್ಯಾಣ ಟ್ರಸ್ಟ್ ಗೆ ವೆಚ್ಚದ ವಿವರಗಳನ್ನು ನಿಯಮಿತವಾಗಿ ಸಲ್ಲಿಸಲು ಸೂಚಿಸಲಾಗಿದ್ದು, ಪ್ರಾರಂಭದಿಂದ ಇಲ್ಲಿಯವರೆಗೂ ಈ ಯೋಜನೆಯ ಲಾಭ ಪಡೆದಿರುವ ಒಟ್ಟು ನೌಕರರ ಮಾಹಿತಿ ಲಭ್ಯವಿರುವುದಿಲ್ಲ. |
| ಇ | ಅನುದಾನಿತ ಶಾಲೆಗಳ ಶಿಕ್ಷಕರಿಗೂ ಜ್ಯೋತಿ ಸಂಜೀವಿನಿ ಯೋಜನೆ ನೀಡುವ ಬಗ್ಗೆ ಸರ್ಕಾರದ ಗಮನದಲ್ಲಿ ಇದೆಯೇ: ಇದ್ದಲ್ಲಿ, ಯಾವ ಅವಧಿಯಿಂದ ಅನುಷ್ಠಾನಗೊಳಿಸಲಾಗುವುದು; | ಅನುದಾನಿತ ಶಾಲೆಗಳ ಶಿಕ್ಷಕರಿಗೆ ಕರ್ನಾಟಕ ಶಿಕ್ಷಣ ಕಾಯ್ದೆ 1983 ರ ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲಾ ಸಿಬ್ಬಂದಿ, ನೇಮಕಾತಿ, ಸೇವಾ ಷರತ್ತು ನಿಯಮಗಳು 1999 ರ ಅನೆಕ್ಷರ್-2 ಷರತ್ತು (3) ರಂತೆ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯ ನೀಡಲು ಅವಕಾಶವಿಲ್ಲದಿರುವುದರಿಂದ ಅನುದಾನಿತ ಶಾಲೆಗಳ ಶಿಕ್ಷಕರಿಗೆ ಜ್ಯೋತಿ ಸಂಜೀವಿನಿ ಯೋಜನೆ ಅನ್ವಯಿಸುವುದಿಲ್ಲ. |
| ಈ | ಈ ಯೋಜನೆಯನ್ನು ಅನುದಾನಿತ ಶಾಲೆಗಳ ಶಿಕ್ಷಕರಿಗೂ ವಿಸ್ತರಿಸಿದರೆ ಸರ್ಕಾರ ಎಷ್ಟು ಹಣ ಖರ್ಚು ಮಾಡಬೇಕಾಗುತ್ತದೆ? | |

ಇಪಿ 375 ಎಸ್‌ಇಎಸ್ 2025

(ಎಸ್ ಮಧುಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ
ಇಲಾಖಾ ಸಚಿವರು

ಅನುಬಂಧ-1



## ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ವಿಷಯ: ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ನಗದುರಹಿತ ವೈದ್ಯಕೀಯ ಚಿಕಿತ್ಸೆ ಒದಗಿಸಲು "ಜ್ಯೋತಿ ಸಂಜೀವಿನಿ" ಯೋಜನೆಯನ್ನು 2014-15ನೇ ಸಾಲಿನಿಂದ ಜಾರಿಗೊಳಿಸುವ ಬಗ್ಗೆ.

ಓದಲಾಗಿದೆ:- 1. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು ಇವರ ಮನವಿ ದಿನಾಂಕ.29/06/2011.

2. ಮಾನ್ಯ ಮುಖ್ಯಮಂತ್ರಿಯವರು ದಿನಾಂಕ. 14/02/2014 ರಂದು ಮಂಡಿಸಿದ 2014-15ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಮಾಡಿರುವ ಘೋಷಣೆ.

ಪ್ರಸ್ತಾವನೆ:-

ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು, 1963 ರನ್ವಯ ಸರ್ಕಾರಿ ಆಸ್ಪತ್ರೆಗಳಲ್ಲಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಆಸ್ಪತ್ರೆಗಳಲ್ಲಿ ಪಡೆದ ವೈದ್ಯಕೀಯ ಚಿಕಿತ್ಸೆಗಳಿಗೆ ತಗಲುವ ವೆಚ್ಚವನ್ನು ಸಿ.ಜಿ.ಹೆಚ್.ಎಸ್.ಪ್ಯಾಕೇಜ್ ದರದಂತೆ ಮರುಪಾವತಿ ಮಾಡಲಾಗುತ್ತಿದೆ. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು ಇವರು ಸರ್ಕಾರದಿಂದ ಮಾನ್ಯತೆ ಪಡೆದ ವಿವಿಧ ಖಾಸಗಿ ಆಸ್ಪತ್ರೆಗಳಲ್ಲಿ ಸರ್ಕಾರಿ ನೌಕರರು ಹಾಗೂ ಅವರ ಕುಟುಂಬದ ಅವಲಂಬಿತ ಸದಸ್ಯರು ಚಿಕಿತ್ಸೆ ಪಡೆದ ಸಂದರ್ಭಗಳಲ್ಲಿ ಆಸ್ಪತ್ರೆಗಳು ವಿಧಿಸುವ ದರ ಮತ್ತು ಸರ್ಕಾರದಿಂದ ಮರು ಪಾವತಿಯಾಗುತ್ತಿರುವ ಮೊತ್ತದ ಪ್ರಮಾಣದಲ್ಲಿ ವ್ಯತ್ಯಾಸವಿದ್ದು, ಇದರಿಂದ ಸರ್ಕಾರಿ ನೌಕರರ ಹೆಚ್ಚಿನ ಚಿಕಿತ್ಸಾ ವೆಚ್ಚವನ್ನು ಭರಿಸಬೇಕಾದ ಪರಿಸ್ಥಿತಿ ಇರುವುದರಿಂದ ಸರ್ಕಾರಿ ನೌಕರರಿಗೆ ಮತ್ತು ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ನಗದುರಹಿತ ವೈದ್ಯಕೀಯ ಚಿಕಿತ್ಸೆ ನೀಡುವ ಯೋಜನೆಯನ್ನು ಜಾರಿಗೊಳಿಸಲು ಬೇಡಿಕೆ ಸಲ್ಲಿಸಿರುತ್ತಾರೆ. ಸಂಘದ ಬೇಡಿಕೆ ಕುರಿತು ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಜಂಟಿ ಸಮಾಲೋಚನಾ ಸಭೆಯಲ್ಲಿ ಚರ್ಚಿಸಲಾಗಿರುತ್ತದೆ.

ಮಾನ್ಯ ಮುಖ್ಯಮಂತ್ರಿಯವರು ದಿನಾಂಕ:14/02/2014ರಂದು ಮಂಡಿಸಿದ 2014-15ನೇ ಸಾಲಿನ ಆಯವ್ಯಯ ಭಾಷಣದಲ್ಲಿ – "ಹಾಲಿ ಇರುವ ವೈದ್ಯಕೀಯ ವೆಚ್ಚ ಮರುಪಾವತಿ ನಿಯಮಗಳನುಸಾರ ಸರ್ಕಾರಿ ನೌಕರರು ವೆಚ್ಚ ಮರುಪಾವತಿಸಿಕೊಳ್ಳುವಲ್ಲಿನ ತೊಂದರೆಗಳನ್ನು ಪರಿಹರಿಸುವ ದೃಷ್ಟಿಯಿಂದ ಪ್ರಾಯೋಗಿಕವಾಗಿ 7 ಮಾರಣಾಂತಿಕ ಕಾಯಿಲೆಗಳಿಗೆ ಸಂಬಂಧಪಟ್ಟಂತೆ ಮಾತ್ರ ನಗದುರಹಿತ ವೈದ್ಯಕೀಯ ಚಿಕಿತ್ಸಾ ಸೌಲಭ್ಯವನ್ನು ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರಿಗೆ ಒದಗಿಸಲು "ಜ್ಯೋತಿ ಸಂಜೀವಿನಿ" ಎಂಬ ನೂತನ ಯೋಜನೆಯನ್ನು ಜಾರಿಗೆ ತರಲು ಉದ್ದೇಶಿಸಲಾಗಿದೆ" – ಎಂದು ಘೋಷಣೆ ಮಾಡಿರುತ್ತಾರೆ.

ರಾಜ್ಯ ಸರ್ಕಾರಿ ನೌಕರರಿಗೆ ಮತ್ತು ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ನಗದುರಹಿತ ವೈದ್ಯಕೀಯ ಚಿಕಿತ್ಸೆ ಒದಗಿಸಲು ಯೋಜನೆಯ ರೂಪುರೇಷೆಗಳನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 14 ಎಸ್.ಎಂ.ಆರ್.2013 ಬೆಂಗಳೂರು, ದಿನಾಂಕ. 18-08-2014.**

ಸರ್ಕಾರವು ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಕುಟುಂಬದ ಅವಲಂಬಿತ ಸದಸ್ಯರುಗಳಿಗೆ ನಗದುರಹಿತ ವೈದ್ಯಕೀಯ ಚಿಕಿತ್ಸೆ ಒದಗಿಸಲು "ಜ್ಯೋತಿ ಸಂಜೀವಿನಿ" ಎಂಬ ನೂತನ ಯೋಜನೆಯನ್ನು 2014-15ನೇ ಸಾಲಿನಿಂದ ಜಾರಿಗೊಳಿಸಲು ಮಂಜೂರಾತಿ ನೀಡಿದೆ.

2. ಈ ಯೋಜನೆಯಡಿಯಲ್ಲಿ ಕೆಳಕಂಡ 7 ಮಾರಣಾಂತಿಕ ಖಾಯಿಲೆಗಳಿಗೆ ಸಂಬಂಧಿಸಿದಂತೆ ಗುರುತಿಸಲಾಗಿರುವ 449 ರೀತಿಯ ವೈದ್ಯಕೀಯ ಚಿಕಿತ್ಸಾ ವಿಧಾನಗಳು ಹಾಗೂ 50 ಮುಂದುವರಿದ ಚಿಕಿತ್ಸಾ ಸೌಲಭ್ಯಗಳು ನಗದುರಹಿತವಾಗಿ ದೊರಕುತ್ತವೆ.

| Sl No. | Diseases | No. of Treatment Procedures | No. of Follow up Procedures |
|---|---|---|---|
| 1. | Cardiac Speciality (Cardiothoracic Surgery, Cardiovascular Surgery and other Cardiac Surgeries) | 145 | 23 |
| 2. | Cancer (Surgical Oncology, Medical Oncology & Radiation Oncology) | 189 | 01 |
| 3. | Neuro Surgery (Cranial, Spinal and peripheral neurosurgeries) | 50 | 18 |
| 4. | Urology (renal and congenital malformations) | 21 | 08 |
| 5. | Burns (electrical shocks and scalds surgeries) | 11 | -- |
| 6. | Polytrauma cases (Not covered by Motor Vehicle Insurance) | 08 | -- |
| 7. | Paediatric and Neo-Natal Surgeries | 25 | -- |
| | Total | 449 | 50 |

3. ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963ರ ನಿಯಮ 2ರನ್ವಯ "ಕುಟುಂಬ" ಪದದ ಅರ್ಥವ್ಯಾಪ್ತಿಯಲ್ಲಿ ಬರುವ ಈ ಕೆಳಕಂಡ ಅವಲಂಬಿತ ಸದಸ್ಯರು ನಿಗದಿತ ಅರ್ಹತಾ ಮಾನದಂಡಗಳಿಗೆ ಒಳಪಟ್ಟು ನಗದುರಹಿತ ವೈದ್ಯಕೀಯ ಸೌಲಭ್ಯಗಳನ್ನು ಪಡೆಯುವರು.

ಅ. ಸರ್ಕಾರಿ ನೌಕರರ ಪತಿ / ಪತ್ನಿ

ಆ. ಸರ್ಕಾರಿ ನೌಕರರ ತಂದೆ ಮತ್ತು ತಾಯಿ (ಮಲತಾಯಿ ಒಳಗೊಂಡಂತೆ) (ಇವರು ಸರ್ಕಾರಿ ನೌಕರರ ಜೊತೆಯಲ್ಲಿ ಸಾಧಾರಣವಾಗಿ ವಾಸವಿರತಕ್ಕದ್ದು ಮತ್ತು ಇವರ ಮಾಸಿಕ ಆದಾಯ ರೂ. 6000-00ಗಳನ್ನು ಮೀರತಕ್ಕದ್ದಲ್ಲ).

ಇ. ಮಕ್ಕಳು (ದತ್ತು ಮಕ್ಕಳು ಹಾಗೂ ಮಲತಾಯಿ ಮಕ್ಕಳು ಒಳಗೊಂಡಂತೆ) ಇವರು ಸರ್ಕಾರಿ ನೌಕರರ ಮೇಲೆ ಸಂಪೂರ್ಣವಾಗಿ ಅವಲಂಬಿತರಾಗಿರತಕ್ಕದ್ದು ಮತ್ತು ಯಾವುದೇ ಉದ್ಯೋಗ ಅಥವಾ ಆದಾಯವನ್ನು ಹೊಂದಿರತಕ್ಕದ್ದಲ್ಲ.

ಸರ್ಕಾರಿ ನೌಕರರು ತಮ್ಮ ಕುಟುಂಬದ ಸದಸ್ಯರ ಅವಲಂಬನೆಯ ಕುರಿತು ಮೇಲಿನಂತೆ ಘೋಷಣೆಯನ್ನು ಸಲ್ಲಿಸತಕ್ಕದ್ದು.

4. ರಾಜ್ಯ ಸರ್ಕಾರಿ ನೌಕರರು ಪಡೆಯುತ್ತಿರುವ ವೇತನ ಶ್ರೇಣಿಗನುಗುಣವಾಗಿ ಈ ಕೆಳಕಂಡ ದರ್ಜೆಯ ವಾರ್ಡ್‌ಗಳಲ್ಲಿ ಚಿಕಿತ್ಸೆ ಪಡೆಯಲು ಅರ್ಹರಾಗಿರುತ್ತಾರೆ.

| | Range of Pay | Category of Ward/class of Accommodations To which entiled |
|---|---|---|
| i) | Up to Rs.16,000 per month | General Ward |
| ii) | Rs.16,001 to Rs.43,200 | Semi Private Ward |
| iii) | Rs.43,201 and above | Private Ward |

5. ರಾಜ್ಯ ಸರ್ಕಾರದ ಇಲಾಖೆಗಳಲ್ಲಿ ಸರ್ಕಾರಿ ನೌಕರರು ಮತ್ತು ಅವರ ಕುಟುಂಬದ ಅವಲಂಬಿತ ಸದಸ್ಯರುಗಳಿಗೆ ಈಗಾಗಲೇ ಪ್ರತ್ಯೇಕ ಆರೋಗ್ಯ ಯೋಜನೆಗಳು ಜಾರಿಯಾಗುತ್ತಿದ್ದಲ್ಲಿ ಅವರುಗಳಿಗೆ "ಜ್ಯೋತಿ ಸಂಜೀವಿನಿ" ಯೋಜನೆಯು ಅನ್ವಯವಾಗುವುದಿಲ್ಲ.

6. "ಜ್ಯೋತಿ ಸಂಜೀವಿನಿ" ಯೋಜನೆಯಡಿಯಲ್ಲಿ ಮೇಲೆ ತಿಳಿಸಿದ 7 ಮಾರಣಾಂತಿಕ ಖಾಯಿಲೆಗಳಿಗೆ ನಗದುರಹಿತ ಚಿಕಿತ್ಸೆ ದೊರಕುವುದರಿಂದ, ಇವುಗಳಿಗೆ ವೈದ್ಯಕೀಯ ವೆಚ್ಚ ಮರುಪಾವತಿ ನಿಯಮಗಳು ಅನ್ವಯವಾಗುವುದಿಲ್ಲ. ಈ ಸಂಬಂಧದಲ್ಲಿ ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963ಕ್ಕೆ ತಿದ್ದುಪಡಿಗಳನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದು.

7. ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಕುಟುಂಬದ ಅವಲಂಬಿತ ಸದಸ್ಯರು ಹೊಂದಿರುವ "ಆಧಾರ್ ಕಾರ್ಡ್"ಗಳನ್ನು ಈ ಯೋಜನೆಯಡಿಯಲ್ಲಿ ಸೌಲಭ್ಯಗಳನ್ನು ಪಡೆಯಲು ಗುರುತಿನ ಚೀಟಿಯನ್ನಾಗಿ ಪರಿಗಣಿಸಲಾಗುವುದು."ಆಧಾರ್ ಕಾರ್ಡ್" ಹೊಂದಿರುವ ಸರ್ಕಾರಿ ನೌಕರರು ಯು.ಐ.ಡಿ. ನಂಬರನ್ನು ವೇತನ ಬಟವಾಡೆ ಅಧಿಕಾರಿಗಳ ಮೂಲಕ ಹೆಚ್.ಆರ್.ಎಂ.ಎಸ್.ನಲ್ಲಿ ಅಳವಡಿಸಲು ಕ್ರಮಕೈಗೊಳ್ಳತಕ್ಕದ್ದು. "ಆಧಾರ್ ಕಾರ್ಡ್" ಹೊಂದಿಲ್ಲದೆ ಇರುವ ಸರ್ಕಾರಿ ನೌಕರರು ಮತ್ತು ಅವರ ಕುಟುಂಬ ಸದಸ್ಯರ ಭಾವಚಿತ್ರ ಸಹಿತ ವಿವರಗಳನ್ನು ಸಂಬಂಧಪಟ್ಟ ವೇತನ ಬಟವಾಡೆ ಅಧಿಕಾರಿಗಳು ಪಡೆದು ಹೆಚ್.ಆರ್.ಎಂ.ಎಸ್.ನಲ್ಲಿ ಅಳವಡಿಸಬೇಕು ಹಾಗೂ ಅದನ್ನು ಗುರುತಿನ ಚೀಟಿಯನ್ನಾಗಿ "ಆಧಾರ್ ಕಾರ್ಡ್" ಲಭ್ಯವಾಗುವವರೆಗೆ ಬಳಸಲಾಗುವುದು.

8. "ಜ್ಯೋತಿ ಸಂಜೀವಿನಿ" ಯೋಜನೆಯನ್ನು ಅನುಷ್ಠಾನಗೊಳಿಸುವ ಜವಾಬ್ದಾರಿಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ "ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್"ಗೆ ವಹಿಸಲಾಗಿದೆ. ಈ ಟ್ರಸ್ಟ್ ಹೊಂದಿರುವ ನೆಟ್‌ವರ್ಕ್ ಆಸ್ಪತ್ರೆಗಳ (ಹೊರ ರಾಜ್ಯದಲ್ಲಿರುವ ಆಸ್ಪತ್ರೆಗಳು ಒಳಗೊಂಡಂತೆ) ಮುಖಾಂತರ "ಜ್ಯೋತಿ ಸಂಜೀವಿನಿ" ಯೋಜನೆಯಡಿಯಲ್ಲಿ ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ನಗದು ರಹಿತ ವೈದ್ಯಕೀಯ ಚಿಕಿತ್ಸೆಯನ್ನು ಒದಗಿಸತಕ್ಕದ್ದು. ಹಾಗೂ ಈ ಯೋಜನೆಯ ನಿರ್ವಹಣೆಯನ್ನು ಮಾಡತಕ್ಕದ್ದು. ಇದಕ್ಕಾಗಿ "ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್" ಹಾಲಿ ಇರುವ ನೆಟ್‌ವರ್ಕ್ ಆಸ್ಪತ್ರೆಗಳು ಹಾಗೂ ಗುರುತಿಸಲಾಗುವ ಇತರ ಆಸ್ಪತ್ರೆಗಳೊಂದಿಗೆ "ಜ್ಯೋತಿ ಸಂಜೀವಿನಿ" ಯೋಜನೆ ಅನುಷ್ಠಾನಗೊಳಿಸುವ ಕುರಿತು ದರ ನಿಗದಿಗೊಳಿಸಿ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

9. "ಜ್ಯೋತಿ ಸಂಜೀವಿನಿ" ಯೋಜನೆಯಡಿಯಲ್ಲಿ ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ನಗದುರಹಿತ ವೈದ್ಯಕೀಯ ಸೌಲಭ್ಯಗಳನ್ನು ಒದಗಿಸಲು ವಾರ್ಷಿಕ ಅಂದಾಜು ರೂ.90 ಕೋಟಿ ಹಾಗೂ ಈ ಯೋಜನೆಯನ್ನು ಅನುಷ್ಠಾನಗೊಳಿಸಲು "ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್"ಗೆ ನೀಡಬೇಕಾದ ವಾರ್ಷಿಕ ಆಡಳಿತಾತ್ಮಕ ವೆಚ್ಚ ರೂ.3–00 ಕೋಟಿಗಳ ವೆಚ್ಚವನ್ನು ಭರಿಸಲು ಮಂಜೂರಾತಿ ನೀಡಲಾಗಿದೆ. ಕರ್ನಾಟಕ ಸರ್ಕಾರ ಆರೋಗ್ಯ ಕಲ್ಯಾಣ ಟ್ರಸ್ಟ್‌ಗೆ ಈಗಾಗಲೇ ರೂ.5–00 ಕೋಟಿಗಳನ್ನು ಬಿಡುಗಡೆ ಮಾಡಿದ್ದು, 2014–15ನೇ ಸಾಲಿನಲ್ಲಿ ಆಯವ್ಯಯದ ಪೂರಕ ಅಂದಾಜು (ಒಂದನೇ ಕಂತು) ಗಳಲ್ಲಿ ಈ ಬಾಬ್ತಿಗೆ ರೂ.10 ಕೋಟಿ ಅನುದಾನವನ್ನು ಒದಗಿಸಲಾಗುವುದು. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರು ಈ ಮೊತ್ತದಲ್ಲಿ "ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್"ಗೆ "ಜ್ಯೋತಿ ಸಂಜೀವಿನಿ" ಯೋಜನೆ ಅನುಷ್ಠಾನದ ಆಡಳಿತಾತ್ಮಕ ವೆಚ್ಚಕ್ಕಾಗಿ 2014–15ನೇ ಸಾಲಿಗೆ ರೂ.2–00 ಕೋಟಿಗಳನ್ನು ಪಾವತಿಸಲು ಮಂಜೂರಾತಿ ನೀಡಲಾಗಿದೆ.

10. "ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್" "ಜ್ಯೋತಿ ಸಂಜೀವಿನಿ" ಯೋಜನೆ ಅನುಷ್ಠಾನ ಮತ್ತು ನಿರ್ವಹಣೆಗೆ ಅಗತ್ಯ ಸಿಬ್ಬಂದಿ, ವಾಹನ ಮತ್ತು ಪೀಠೋಪಕರಣಗಳನ್ನು ವ್ಯವಸ್ಥೆಗೊಳಿಸಲು ಸಚಿವಾಲಯದ ಆಡಳಿತ ಇಲಾಖೆಯಾದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಆಡಳಿತಾತ್ಮಕ ಮಂಜೂರಾತಿಯನ್ನು ಪಡೆದುಕೊಳ್ಳುವುದು.

11. "ಜ್ಯೋತಿ ಸಂಜೀವಿನಿ" ಯೋಜನೆಯಡಿಯಲ್ಲಿ ಸರ್ಕಾರಿ ನೌಕರರು ಮತ್ತು ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ನಗದು ರಹಿತ ವೈದ್ಯಕೀಯ ಚಿಕಿತ್ಸೆ ಒದಗಿಸುವ ನೆಟ್‌ವರ್ಕ್ ಆಸ್ಪತ್ರೆಗಳು ವೈದ್ಯಕೀಯ ವೆಚ್ಚದ ಬಿಲ್ಲುಗಳನ್ನು ನಿಗದಿತ ದರಗಳಲ್ಲಿ ತಯಾರಿಸಿ "ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್"ಗೆ ಸಲ್ಲಿಸತಕ್ಕದ್ದು. "ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್" ಅಥವಾ ಸಂಬಂಧಿಸಿದ ಪ್ರಾಧಿಕಾರ ಈ ಬಿಲ್ಲುಗಳನ್ನು ಐಟಂವಾರು ಪರಿಶೀಲಿಸಿ ಚೆಕ್ ಮುಖಾಂತರ ಆಸ್ಪತ್ರೆಗೆ ಪಾವತಿಸತಕ್ಕದ್ದು. ವೈದ್ಯಕೀಯ ವೆಚ್ಚದ ಬಿಲ್ಲುಗಳಲ್ಲಿನ ನಾನ್ ಮೆಡಿಕಲ್ ಐಟಂಗಳು (ದೂರವಾಣಿ ಬಿಲ್, ಆಹಾರ, ಪಾನೀಯ, ಟಿ.ವಿ.) ಇತ್ಯಾದಿಗಳ ವೆಚ್ಚವನ್ನು ಹಾಗೂ ಅರ್ಹತೆಗಿಂತ ಹೆಚ್ಚಿನ ದರ್ಜೆಯ ವಾರ್ಡಿನಲ್ಲಿ ಚಿಕಿತ್ಸೆ ಪಡೆದ ಹೆಚ್ಚುವರಿ ವೆಚ್ಚವನ್ನು ಮತ್ತು ಅಗತ್ಯವಿರುವ ಚಿಕಿತ್ಸಾ ವಿಧಾನದಲ್ಲಿ ನಿಗದಿಪಡಿಸಿರುವ ಪ್ಯಾಕೇಜ್ ದರದಲ್ಲಿನ ಹೆಚ್ಚುವರಿಯಾದ ವ್ಯತ್ಯಾಸದ ಮೊಬಲಗನ್ನು ಸರ್ಕಾರಿ ನೌಕರರೇ ನೇರವಾಗಿ ಆಸ್ಪತ್ರೆಗೆ ಪಾವತಿಸತಕ್ಕದ್ದು. ಚಿಕಿತ್ಸೆಯ ಸಂದರ್ಭದಲ್ಲಿ ಗುರುತಿಸಲಾಗಿಲ್ಲದ ಬೇರೊಂದು ಚಿಕಿತ್ಸಾ ವಿಧಾನವನ್ನು ರೋಗಿಯ ಹಿತದೃಷ್ಟಿಯಿಂದ ನೀಡಬೇಕೆಂದು ಆಸ್ಪತ್ರೆಯ ತಜ್ಞರು ನಿರ್ಧರಿಸಿದಲ್ಲಿ, ಅದರ ವೆಚ್ಚವನ್ನು "ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್" ಪರಿಶೀಲಿಸಿ ತಜ್ಞರ ಅಭಿಪ್ರಾಯ ಪಡೆದು ಪಾವತಿಸುವುದು.

12. "ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್", ಸರ್ಕಾರಿ ನೌಕರರು ಮತ್ತು ಚಿಕಿತ್ಸೆ ನೀಡುವ ಆಸ್ಪತ್ರೆಗಳ ನಡುವೆ ಸಂವಹನ, ಪಾರದರ್ಶಕತೆ ಕಾಯ್ದುಕೊಳ್ಳಲು ಹಾಗೂ ಸಮಸ್ಯೆಗಳ ಪರಿಹಾರಕ್ಕಾಗಿ ಮತ್ತು ಸೌಲಭ್ಯಗಳಲ್ಲಿನ ಸುಧಾರಣೆಗಾಗಿ ಕುಂದು–ಕೊರತೆಗಳ ಒಂದು ಕೋಶವನ್ನು ರಚಿಸುವುದು. ಇದಲ್ಲದೆ ಒಂದು ವೆಬ್‌ಸೈಟ್ ನಿರ್ಮಿಸಿ "ಜ್ಯೋತಿ ಸಂಜೀವಿನಿ" ಯೋಜನೆಯಡಿಯಲ್ಲಿ ಲಭ್ಯವಾಗುವ ಚಿಕಿತ್ಸೆಗಳು, ಸೌಲಭ್ಯಗಳು, ಆಸ್ಪತ್ರೆಗಳ ವಿವರಗಳು ಇತ್ಯಾದಿ ಮಾಹಿತಿಗಳು ಆನ್‌ಲೈನ್‌ನಲ್ಲಿ ಲಭ್ಯವಾಗುವಂತೆ ಮಾಡುವುದು.

13. "ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್" 3 ತಿಂಗಳಿಗೊಮ್ಮೆ ಸಭೆ ಸೇರಿ "ಜ್ಯೋತಿ ಸಂಜೀವಿನಿ" ಯೋಜನೆಯ ಅನುಷ್ಠಾನ ಹಾಗೂ ನಿರ್ವಹಣೆ ಕುರಿತು ಪರಿಶೀಲಿಸತಕ್ಕದ್ದು. "ಕರ್ನಾಟಕ ಸರ್ಕಾರ ಆರೋಗ್ಯ ಕಲ್ಯಾಣ ಟ್ರಸ್ಟ್"ಗೆ ಯೋಜನೆಯ ಅನುಷ್ಠಾನದ ವಿವರಗಳು, ವೆಚ್ಚದ ವಿವರಗಳನ್ನು ನಿಯಮಿತವಾಗಿ ಸಲ್ಲಿಸುವುದು.

14. ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ.ಎಫ್‌ಡಿ/413/ವೆಚ್ಚ–12/2014 ದಿನಾಂಕ 27/05/2014 ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ.

ಅನುಬಂಧ-2

<u>**ಕರ್ನಾಟಕ ಸರ್ಕಾರದ ನಡವಳಿಗಳು**</u>

**ವಿಷಯ:** ಕರ್ನಾಟಕ ರಾಜ್ಯ ಸರ್ಕಾರಿ ನೌಕರರಿಗೆ ಹಾಗೂ ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ನಗದುರಹಿತ ವೈದ್ಯಕೀಯ ಚಿಕಿತ್ಸೆಗಳನ್ನು ಒದಗಿಸಲು ರಾಜ್ಯ ಸರ್ಕಾರದಿಂದ ರೂಪಿಸಲಾಗಿರುವ **'ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ'** (KASS) ಯನ್ನು **ಅಕ್ಟೋಬರ್ 01, 2025 ರಿಂದ ಜಾರಿಗೆ ತರುವ** ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 16 ಎಸ್‌ಎಂಆರ್ 2020, ದಿನಾಂಕ: 17.08.2021.
2. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 16 ಎಸ್‌ಎಂಆರ್ 2020, ದಿನಾಂಕ: 05.09.2022.
3. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 16 ಎಸ್‌ಎಂಆರ್ 2020, ದಿನಾಂಕ: 09.03.2023.
4. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 16 ಎಸ್‌ಎಂಆರ್ 2020, ದಿನಾಂಕ: 27.09.2024.
5. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 16 ಎಸ್‌ಎಂಆರ್ 2020, ದಿನಾಂಕ:02.04.2025.
6. ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 16 ಎಸ್‌ಎಂಆರ್ 2020, ದಿನಾಂಕ:19.04.2025.

**ಪ್ರಸ್ತಾವನೆ:**

1. ರಾಜ್ಯ ಸರ್ಕಾರಿ ನೌಕರರಿಗೆ ಹಾಗೂ ಅವರ ಅವಲಂಬಿತ ಕುಟುಂಬದ ಸದಸ್ಯರಿಗೆ ನಗದು ರಹಿತ ವೈದ್ಯಕೀಯ ಚಿಕಿತ್ಸೆಗಳನ್ನು ಒದಗಿಸಲು ರಾಜ್ಯ ಸರ್ಕಾರದಿಂದ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯನ್ನು (KASS) ಅನುಷ್ಠಾನಗೊಳಿಸುವ ಸಂಬಂಧ ಮೇಲೆ ಕ್ರ.ಸಂ.(1) ರಿಂದ (6) ರಲ್ಲಿ ಓದಲಾದ ಸರ್ಕಾರದ ಆದೇಶ/ ಸುತ್ತೋಲೆಗಳಲ್ಲಿ ಕೆಲವು ಕಾರ್ಯನೀತಿ ಸೂಚನೆಗಳನ್ನು ನೀಡಲಾಗಿದೆ.

2. ಯೋಜನೆಯಡಿ ಸರ್ಕಾರಿ ನೌಕರರ ನೋಂದಾವಣೆ, ಮಾಸಿಕ ವಂತಿಕೆ ಮತ್ತು ಯೋಜನೆಗೆ ಒಳಪಡಲು/ ಒಳಪಡದೇ ಇರಲು, ಆಯ್ಕೆ ವ್ಯಕ್ತಪಡಿಸುವುದು ಮುಂತಾದ ಅಂಶಗಳ ಕುರಿತು ಮೇಲೆ ಓದಲಾದ (6) ರ ದಿನಾಂಕ: 19.04.2025 ರ ಸುತ್ತೋಲೆಯಲ್ಲಿ ಕೆಲವು ಸೂಚನೆಗಳನ್ನು ನೀಡಲಾಗಿದೆ. ಯೋಜನೆಗೆ ಒಳಪಡಲು ಇಚ್ಛೆ ವ್ಯಕ್ತಪಡಿಸುವ ಸರ್ಕಾರಿ ನೌಕರರು ಮಾಸಿಕ ವಂತಿಕೆಯನ್ನು ಯಾವ ಲೆಕ್ಕ ಶೀರ್ಷಿಕೆಯಡಿ ಪಾವತಿಸಬೇಕು ಹಾಗೂ ಇತರ ವಿಧಿ-ವಿಧಾನಗಳ ಬಗ್ಗೆ ಮಾರ್ಗಸೂಚಿಗಳನ್ನು (SOP) ನೀಡಲಾಗುವುದೆಂದು ಸದರಿ ಸುತ್ತೋಲೆಯಲ್ಲಿ ತಿಳಿಸಲಾಗಿತ್ತು.

3. ಈ ಹಿನ್ನೆಲೆಯಲ್ಲಿ ಸದರಿ ಯೋಜನೆಗೆ ಸಂಬಂಧಿಸಿದಂತೆ ಸರ್ಕಾರದಿಂದ ಮತ್ತಷ್ಟು ಪರಿಷ್ಕೃತ ಸೂಚನೆಗಳನ್ನು ನೀಡಿ **ಅಕ್ಟೋಬರ್ 01, 2025 ರಿಂದ ಜಾರಿಗೆ** ತರುವುದು ಅವಶ್ಯವೆಂದು ಪರಿಗಣಿಸಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 16 ಎಸ್‌ಎಂಆರ್ 2020</u>**
**<u>ದಿನಾಂಕ: 23.09.2025</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಪರಿಶೀಲಿಸಿ, **'ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ'ಯು (KASS) ಅಕ್ಟೋಬರ್ 01, 2025 ರಿಂದ ಜಾರಿಗೆ ಬರುವಂತೆ ಆದೇಶಿಸಿದೆ.**

1. **<u>ಯೋಜನೆಗೆ ಸರ್ಕಾರಿ ನೌಕರರ ಮಾಸಿಕ ವಂತಿಕೆಯನ್ನು ಪಾವತಿಸುವ ಬಗ್ಗೆ:</u>**

    a. **ಮಾಸಿಕ ವಂತಿಕೆಯನ್ನು ಪಾವತಿಸುವ ವಿಧಾನ:** ಯೋಜನೆಯಡಿ ಸರ್ಕಾರಿ ನೌಕರರ ವೇತನದಿಂದ ಕಡಿತಗೊಳಿಸಲ್ಪಟ್ಟ ವಂತಿಕೆಯನ್ನು ಎಲ್ಲಾ ಡಿಡಿಓಗಳು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ನಿಂದ ಈ ಉದ್ದೇಶಕ್ಕಾಗಿಯೇ ತೆರೆಯಲಾದ ಬ್ಯಾಂಕ್ ಖಾತೆಗೆ ಖಜಾನೆ-2 ರಲ್ಲಿ ಸೃಜಿಸಲಾಗುವ ಸ್ವೀಕೃತಿದಾರರ ಐಡಿ (ID) ಗೆ ಜಮಾ ಮಾಡತಕ್ಕದ್ದು. (ಬ್ಯಾಂಕ್ ಖಾತೆ ವಿವರಗಳನ್ನು ಡಿಡಿಓಗಳಿಗೆ HRMS ಮುಖಾಂತರ ತಿಳಿಸಲಾಗುವುದು).

    b. **ಸರ್ಕಾರಿ ನೌಕರನ ಪತಿ ಅಥವಾ ಪತ್ನಿ ಕೂಡ ಸರ್ಕಾರಿ ನೌಕರರಾಗಿರುವಲ್ಲಿ, ವಂತಿಕೆಯನ್ನು ಪಾವತಿಸುವ ಬಗ್ಗೆ:** ವಂತಿಕೆಯನ್ನು ಪತಿ ಅಥವಾ ಪತ್ನಿ ಇಬ್ಬರಲ್ಲಿ ಒಬ್ಬರು ಪಾವತಿಸುವ ಬಗ್ಗೆ ಸಂಬಂಧಪಟ್ಟ ಸರ್ಕಾರಿ ನೌಕರರೇ ತೀರ್ಮಾನಿಸಿ ಸಂಬಂಧಿಸಿದ ಡಿಡಿಓ ರವರಿಗೆ ಮಾಹಿತಿ ನೀಡುವುದು.

    c. **HRMS ವ್ಯಾಪ್ತಿಯಲ್ಲಿರದ (ಬೇರೆ ಇಲಾಖೆಗಳಲ್ಲಿ, ಸಾರ್ವಜನಿಕ ಸಂಸ್ಥೆಗಳಲ್ಲಿ ನಿಯೋಜನೆ, ಅನ್ಯ ಸೇವೆ) ರಾಜ್ಯ ಸರ್ಕಾರಿ ನೌಕರರ ವಂತಿಕೆ ಕಟಾವಣೆ:** ಅಂತಹ ನಿಯೋಜಿತ ನೌಕರರ ಮಾಸಿಕ ವೇತನದಲ್ಲಿ ವಂತಿಕೆಯನ್ನು ಕಟಾಯಿಸಿ, ಸಂಸ್ಥೆಯಿಂದ ನೇರವಾಗಿ ಟ್ರಸ್ಟ್ ನ ಬ್ಯಾಂಕ್ ಖಾತೆಗೆ ವರ್ಗಾವಣೆ ಮಾಡುವುದು.

    d. **ವಂತಿಕೆ ಕಟಾವಣೆ ಪ್ರಾರಂಭಿಸುವುದು:** ಯೋಜನೆಗೆ ಮಾಸಿಕ ವಂತಿಕೆಯನ್ನು ಮೇ 2025 ರಿಂದ ಸ್ವಯಂಚಾಲಿತವಾಗಿ ಕಟಾಯಿಸಲಾಗುವುದೆಂದು ಮೇಲೆ ಓದಲಾದ (6)ರ ದಿನಾಂಕ: 19.04.2025 ರ ಸುತ್ತೋಲೆಯಲ್ಲಿ ತಿಳಿಸಲಾಗಿತ್ತು. ಈ ಅಂಶವನ್ನು ಮಾರ್ಪಡಿಸಿ ವಂತಿಕೆಯನ್ನು **ಅಕ್ಟೋಬರ್ 2025**ರ ವೇತನದಿಂದ ಮುಂದಿನಂತೆ ಕಟಾಯಿಸುವುದು.

| | |
|---|---|
| ಗ್ರೂಪ್ ಎ | ರೂ. 1000/- |
| ಗ್ರೂಪ್ ಬಿ | ರೂ. 500/- |
| ಗ್ರೂಪ್ ಸಿ | ರೂ. 350/- |
| ಗ್ರೂಪ್ ಡಿ | ರೂ. 250/- |

2. **ಯೋಜನೆಯ ಉದ್ದೇಶಕ್ಕಾಗಿ ಸರ್ಕಾರಿ ನೌಕರನ "ಕುಟುಂಬ" ವ್ಯಾಪ್ತಿಗೆ ಒಳಪಡುವ ತಂದೆ ಮತ್ತು ತಾಯಿಯ ಮಾಸಿಕ ಆದಾಯ ಮಿತಿ ಪರಿಷ್ಕರಣೆ:** ಮೇಲೆ ಓದಲಾದ (5)ರ ದಿನಾಂಕ:02.04.205 ರ ಸರ್ಕಾರದ ಆದೇಶದಲ್ಲಿ "ಕುಟುಂಬ" ಪದವನ್ನು ಮರುವ್ಯಾಖ್ಯಾನಿಸಲಾಗಿದ್ದು, ಅದರಲ್ಲಿ ಸರ್ಕಾರಿ ನೌಕರನ ತಂದೆ ಮತ್ತು ತಾಯಿಯ ಮಾಸಿಕ ಆದಾಯ ಮಿತಿಯನ್ನು ಮಾಸಿಕ ರೂ. 17,000/- ಕ್ಕೆ ನಿಗದಿಪಡಿಸಲಾಗಿದ್ದು, ಈ ಆದಾಯ ಮಿತಿಯನ್ನು ಪರಿಷ್ಕರಿಸಿ ಮಾಸಿಕ ರೂ. 27,000/- ಗಳಿಗೆ ನಿಗದಿಪಡಿಸಲಾಗಿದೆ. (ವಿವಾಹಿತ ಮಹಿಳಾ ಸರ್ಕಾರಿ ನೌಕರರ ತಂದೆ-ತಾಯಿಯವರಿಗೆ ಕೂಡ ಮೇಲಿನ ಆದಾಯ ಮಿತಿ ಹಾಗೂ ವಾಸ್ತವ್ಯದ ಷರತ್ತುಗಳು ಅನ್ವಯಿಸುತ್ತದೆ).

3. **ಯೋಜನೆಗೆ ಒಳಪಡಲು ಅಥವಾ ಒಳಪಡದೇ ಇರಲು ಅಭಿಮತ ವ್ಯಕ್ತಪಡಿಸುವುದು:** ನೌಕರರು ಈ ಯೋಜನೆಗೆ ಒಳಪಡಲು ಅಥವಾ ಒಳಪಡದೆ ಇರಲು (Opt-in, Opt-Out) ಇಚ್ಛಿಸಿದಲ್ಲಿ ದಿನಾಂಕ: 20.05.2025 ರ ಒಳಗಾಗಿ ಮೇಲೆ ಓದಲಾದ (6) ರಲ್ಲಿನ ದಿನಾಂಕ: 19.04.2025 ರ ಸುತ್ತೋಲೆಯ ಅನುಬಂಧ-1 ಹಾಗೂ ಅನುಬಂಧ-2 ರಲ್ಲಿ ನಿಗದಿಪಡಿಸಿರುವ ಘೋಷಣೆಯನ್ನು ತನ್ನ ಮೇಲಾಧಿಕಾರಿ ಮೂಲಕ ಡಿಡಿಓಗಳಿಗೆ ಸಲ್ಲಿಸತಕ್ಕದ್ದು ಎಂದು ತಿಳಿಸಲಾಗಿತ್ತು. ಆದರೆ ನೌಕರರ ಕೋರಿಕೆಯನ್ನು ಗಮನಿಸಿ, ಈ ಸೂಚನೆಗಳನ್ನು ಭಾಗಶ: ಪರಿಷ್ಕರಿಸಿ- ಯೋಜನೆಗೆ ಒಳಪಡಲು ಅಥವಾ ಒಳಪಡದೆ ಇರಲು (Opt-in, Opt-Out) ಲಿಖಿತ ಘೋಷಣೆಯನ್ನು ಸಂಬಂಧಪಟ್ಟ ಡಿಡಿಒಗಳಿಗೆ ಸಲ್ಲಿಸಲು **18 ಅಕ್ಟೋಬರ್, 2025** ರ ವರೆಗೆ ಕಾಲಾವಕಾಶವನ್ನು ವಿಸ್ತರಿಸಲಾಗಿದೆ. ಆದರೆ ಈ ದಿನಾಂಕದೊಳಗೆ ಈ ಯೋಜನೆಗೆ ಒಳಪಡದೇ ಇರಲು ಲಿಖಿತವಾಗಿ ಇಚ್ಛೆ ವ್ಯಕ್ತಪಡಿಸದ ನೌಕರರು ಯೋಜನೆಗೆ ಒಳಪಡುವರೆಂದು ಪರಿಗಣಿಸಲಾಗುವುದು.

4. **'ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ' (KASS)ಯ ವ್ಯಾಪ್ತಿ:** ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963 ಗಳಡಿ ಈ ಯೋಜನೆಯನ್ನು ರಾಜ್ಯ ಸರ್ಕಾರಿ ನೌಕರರಿಗೆ ರೂಪಿಸಿರುವ ಯೋಜನೆಯಾಗಿದೆ. ಈ ಸಂಬಂಧ ಮೇಲೆ ಓದಲಾದ ಕ್ರಮ ಸಂಖ್ಯೆ (2) ಹಾಗೂ (3) ದಿನಾಂಕ: 05.09.2022 ಹಾಗೂ ದಿನಾಂಕ 09.03.2023 ರ ಸರ್ಕಾರದ ಆದೇಶಗಳಲ್ಲಿ ಸ್ಪಷ್ಟೀಕರಣಗಳನ್ನು ನೀಡಲಾಗಿದೆ.

5. **KASS ಯೋಜನೆಯಡಿ ಒಳಗೊಂಡ ಸಾರ್ವಜನಿಕ ವಲಯದ ವೈದ್ಯಕೀಯ ಸಂಸ್ಥೆಗಳು (Public Sector Health Care Organisations) ಒದಗಿಸುವ ವೈದ್ಯಕೀಯ ಸೇವೆಗಳಿಗೆ SAST ನಿಂದ ಮರುಪಾವತಿ ದರಗಳು:** KASS ಯೋಜನೆಯಡಿ ಸರ್ಕಾರಿ ನೌಕರರು ಹಾಗೂ ಅವರ ಕುಟುಂಬದ ಸದಸ್ಯರು ನೋಂದಾಯಿತ ಖಾಸಗಿ ಆಸ್ಪತ್ರೆಗಳಲ್ಲದೇ ಸಾರ್ವಜನಿಕ ವಲಯದ ಅಂದರೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವೈದ್ಯಕೀಯ ಶಿಕ್ಷಣ ಇಲಾಖೆ (Societies Registration Act, 1960 ರಡಿ ನೋಂದಾಯಿಸಲ್ಪಟ್ಟ ವೈದ್ಯಕೀಯ ಸಂಸ್ಥೆಗಳು ಹಾಗೂ ಬೋಧಕ ಆಸ್ಪತ್ರೆಗಳು, ಇತ್ಯಾದಿ), ಸ್ಥಳೀಯ ಸಂಸ್ಥೆಗಳು ನಿರ್ವಹಿಸುವ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಕೂಡ ನಗದುರಹಿತ ವೈದ್ಯಕೀಯ ಸೇವೆಗಳನ್ನು ಪಡೆಯಬಹುದಾಗಿದೆ. ಮೇಲೆ ಓದಲಾದ (2) ರ ದಿನಾಂಕ:05.09.2022ರ ಸರ್ಕಾರದ ಆದೇಶದಲ್ಲಿ ಸಾರ್ವಜನಿಕ ವೈದ್ಯಕೀಯ ಸಂಸ್ಥೆಗಳನ್ನು ವ್ಯಾಖ್ಯಾನಿಸಲಾಗಿದೆ. ಈ ಹಿನ್ನಲೆಯಲ್ಲಿ ಯೋಜನೆಯ ಆರಂಭದ ಹಂತದಲ್ಲಿ ಅಲೋಪತಿ ವೈದ್ಯ ಪದ್ಧತಿಯಡಿ ಸರ್ಕಾರಿ ನೌಕರರು ಇಂತಹ ಸಂಸ್ಥೆಗಳಲ್ಲಿ ಪಡೆಯುವ ವೈದ್ಯಕೀಯ ಚಿಕಿತ್ಸಾ ವೆಚ್ಚಗಳಿಗೆ ಸಂಬಂಧಿಸಿದಂತೆ SAST ಸಂಸ್ಥೆಯು KASS ದರಗಳನ್ನು ಅನ್ವಯಿಸಿ ಮರುಪಾವತಿಸತಕ್ಕದ್ದು.

6. **ಸರ್ಕಾರಿ ನೌಕರರು ಭರಿಸುವ ವೈದ್ಯಕೀಯ ವೆಚ್ಚ ಮರುಪಾವತಿ ಬಗ್ಗೆ ಸ್ಪಷ್ಟೀಕರಣ:** ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯಡಿ ಸರ್ಕಾರಿ ನೌಕರರಿಗೆ ನಗದುರಹಿತ ವೈದ್ಯಕೀಯ ಚಿಕಿತ್ಸೆ ನೀಡಲು ಪ್ರತ್ಯೇಕವಾಗಿ ಖಾಸಗಿ ಆಸ್ಪತ್ರೆಗಳನ್ನು ನೋಂದಾಯಿಸಲು ಕ್ರಮವಹಿಸಲಾಗಿದೆ. ಆದರೆ ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಸ್ವಲ್ಪ ಕಾಲಾವಕಾಶ ಅಗತ್ಯವಿರುತ್ತದೆ. ಈ ಯೋಜನೆಯು ಪೂರ್ಣ ಪ್ರಮಾಣದಲ್ಲಿ ಅನುಷ್ಠಾನಗೊಳ್ಳುವವರೆಗೆ ಸರ್ಕಾರಿ ನೌಕರರು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963 ರ ನಿಯಮಗಳಡಿ ನೋಂದಾಯಿಸಲ್ಪಟ್ಟ 500 ಕ್ಕೂ ಹೆಚ್ಚು ಖಾಸಗಿ ಆಸ್ಪತ್ರೆಗಳಲ್ಲಿ (ಚಿಕಿತ್ಸಾ ವೆಚ್ಚ ಪಾವತಿಸಿ) ವೈದ್ಯಕೀಯ ಚಿಕಿತ್ಸೆ ಪಡೆಯುವ ಹಾಗೂ ತರುವಾಯ ಹಿಂಬರಿಸಿಕೊಳ್ಳುವ ಅವಕಾಶವನ್ನು ಮುಂದಿನ ಆರು ತಿಂಗಳವರೆಗೆ ಅಥವಾ ಮುಂದಿನ ಆದೇಶದವರೆಗೆ ಒದಗಿಸಲಾಗಿದೆ. ಸರ್ಕಾರಿ ನೌಕರರ ಹಿತದೃಷ್ಟಿಯಿಂದ ಈ ಅವಕಾಶವನ್ನು ಯೋಜನೆಗೆ ಒಳಪಡಲು ಇಚ್ಛೆ ವ್ಯಕ್ತಪಡಿಸಿ ನೋಂದಾಯಿಸುವ ಅಥವಾ ಯೋಜನೆಯಿಂದ ಹೊರಗೆ ಉಳಿಯಲು ಇಚ್ಛೆ ವ್ಯಕ್ತಪಡಿಸುವ ಸರ್ಕಾರಿ ನೌಕರರು ಸಹ ಪಡೆಯಬಹುದು.

7. ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ ಜಾರಿಗೆ ಬಂದ ದಿನಾಂಕದಿಂದ ಪ್ರಸ್ತುತ ಜಾರಿಯಲ್ಲಿರುವ "ಜ್ಯೋತಿ ಸಂಜೀವಿನಿ" ಯೋಜನೆಯು ಸ್ಥಗಿತಗೊಳ್ಳುವುದು.

**ಯೋಜನೆಯ ವಿವಿಧ ಕಾರ್ಯಾಚರಣೆಯ ಜವಾಬ್ದಾರಿಗಳು:**

| ಕ್ರಮ ಸಂಖ್ಯೆ | ಕಾರ್ಯಾಚರಣೆಯ ಅಂಶ | ಜವಾಬ್ದಾರಿ |
|---|---|---|
| 1. | ಯೋಜನೆಯ ಫಲಾನುಭವಿಗಳ ಗುರುತಿಸುವಿಕೆ (Beneficiary Identification) ಹಾಗೂ ಅನುಮೋದನೆ. | HRMS 2.0 ನಿರ್ದೇಶನಾಲಯವು HRMS ನಲ್ಲಿ ಈಗಾಗಲೇ ತಂತ್ರಜ್ಞಾನವನ್ನು ಅಭಿವೃದ್ಧಿಪಡಿಸಿದ್ದು, ಇದನ್ನು ಬಳಸಿಕೊಂಡು ಸಂಬಂಧಪಟ್ಟ ಡಿಡಿಒಗಳು ದಿನಾಂಕ:09.03.2023 ರ ಆದೇಶ ಹಾಗೂ HRMS ಹೊರಡಿಸಿರುವ ಮಾರ್ಗಸೂಚಿಗಳನ್ವಯ, ನೋಂದಾಯಿಸಲು ಇಚ್ಛೆ ವ್ಯಕ್ತಪಡಿಸುವ ಸರ್ಕಾರಿ ನೌಕರರು ಹಾಗೂ ಅವರ ಕುಟುಂಬದ ಸದಸ್ಯರ ಅರ್ಹತೆಯನ್ನು ಪರಿಶೀಲಿಸಿ ತಂತ್ರಜ್ಞಾನದಲ್ಲಿ ನೋಂದಾಯಿಸಲು ಕ್ರಮವಹಿಸುವುದು. |
| 2. | ಯೋಜನೆಯ ಅನುಷ್ಠಾನ ಸಂಸ್ಥೆ (Implementing Agency) | ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ (SAST) ಯೋಜನೆಯ ಅನುಷ್ಠಾನ ಸಂಸ್ಥೆಯಾಗಿರುತ್ತದೆ. |
| 3. | ಖಾಸಗಿ ಆಸ್ಪತ್ರೆಗಳನ್ನು ಯೋಜನೆಯಡಿ ನೋಂದಾಯಿಸಿ ಯೋಜನೆಗೆ ಚಾಲನೆ ನೀಡುವುದು ಹಾಗೂ ಫಲಾನುಭವಿಗಳಿಗೆ Smart Card ಒದಗಿಸುವುದು. | ಯೋಜನೆಗೆ ಒಳಪಡಲು ಇಚ್ಛೆ ವ್ಯಕ್ತಪಡಿಸುವ ಹಾಗೂ ಅರ್ಹತೆ ಹೊಂದಿರುವ ಖಾಸಗಿ ಆಸ್ಪತ್ರೆಗಳೊಂದಿಗೆ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ (SAST) ಸರ್ಕಾರ ನಿಗದಿಪಡಿಸಿರುವ ಒಡಂಬಡಿಕೆ (MoU)ಯನ್ನು ಮಾಡಿಕೊಂಡು, ಅಂತಹ ಆಸ್ಪತ್ರೆಗಳನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಅಧಿಸೂಚಿಸಿ ಯೋಜನೆಗೆ ಒಳಪಡಿಸಿ ಚಾಲನೆ ನೀಡುವುದು.<br><br>ಫಲಾನುಭವಿಗಳಿಗೆ Smart Card ಒದಗಿಸಲು ಕೂಡ SAST ಕ್ರಮವಹಿಸುವುದು. |
| 4. | ಯೋಜನೆಯ ಮೇಲ್ವಿಚಾರಣೆ ಹಾಗೂ ಕುಂದು-ಕೊರತೆಗಳ ನಿವಾರಣೆ | ಯೋಜನೆಯ ಮೇಲ್ವಿಚಾರಣೆಗಾಗಿ ಸರ್ಕಾರದ ಆದೇಶ ಸಂಖ್ಯೆ: ದಿನಾಂಕ: 27.09.2024ರಲ್ಲಿ ನಾಲ್ಕು ವಿವಿಧ ಸಮಿತಿಗಳನ್ನು ರಚಿಸಲಾಗಿದೆ.<br><br>ಯೋಜನೆಯ ಕುಂದು-ಕೊರತೆಗಳ ನಿವಾರಣೆಗೆ ಸಂಬಂಧಿಸಿದಂತೆ ಕೂಡ ಜಿಲ್ಲಾ ಮತ್ತು ರಾಜ್ಯ ಮಟ್ಟದ ಸಮಿತಿಗಳನ್ನು ರಚಿಸಲಾಗಿದ್ದು, ಈ ಸಮಿತಿಗಳು ಯೋಜನೆಯ ಕುಂದು-ಕೊರತೆಗಳನ್ನು ಪರಿಶೀಲಿಸಿ ಸೂಕ್ತ ಕ್ರಮಕ್ಕೈಗೊಳ್ಳುವುದು. |

...6

ಈ ಮೇಲ್ಕಂಡ ಸೂಚನೆಗಳು ಹಾಗೂ ಈ ಹಿಂದೆ ಹೊರಡಿಸಿರುವ ಸುತ್ತೋಲೆ/ ಆದೇಶಗಳನ್ವಯ ಕ್ರಮ ಕೈಗೊಂಡು ಈ ಯೋಜನೆಯನ್ನು ದಿನಾಂಕ:01.10.2025 ರಿಂದ ರಾಜ್ಯ ಸರಕಾರಿ ನೌಕರರು ಹಾಗೂ ಅವರ ಅವಲಂಬಿತರಿಗೆ ಪ್ರಾರಂಭಿಸಲು ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರವರಿಗೆ ಆದೇಶಿಸಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ದಿನಾಂಕ:06.09.2025ರ ಹಿಂಬರಹ ಸಂಖ್ಯೆ: ಆಇ 20 ವೆಚ್ಚ-12/2023 ರಲ್ಲಿ ನೀಡಿರುವ ಅಭಿಪ್ರಾಯ/ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಚಂದ್ರಶೇಖರ)**
ಸರ್ಕಾರದ ವಿಶೇಷ ಕಾರ್ಯದರ್ಶಿ(ಪ್ರ)
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು)

ಸಂಕಲನಕಾರರು, ಇ-ರಾಜ್ಯಪತ್ರ, ಬೆಂಗಳೂರು.

**ಇವರಿಗೆ,**

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ) / (ಇ&ಆರ್ಎಸ್-ಎ)/ (ಎ&ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಅಭಿವೃದ್ಧಿ ಆಯುಕ್ತರು ಹಾಗೂ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
5. ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
7. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು, ರಾಜ ಭವನ, ಬೆಂಗಳೂರು
8. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು.
9. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು.

...7

10. ಆಯುಕ್ತರು, ಆಯುಷ್ ಇಲಾಖೆ, ಬೆಂಗಳೂರು.
11. ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು.
12. ಆಯುಕ್ತರು, ಖಜಾನೆ-2, ಖಜಾನೆ ಆಯುಕ್ತರ ಕಛೇರಿ, 6ನೇ ಮಹಡಿ, ಕೆ.ಪಿ.ಟಿ.ಸಿ.ಎಲ್. ಅರಮನೆ ರಸ್ತೆ, ಬೆಂಗಳೂರು.
13. ಯೋಜನಾ ನಿರ್ದೇಶಕರು,HRMS 2.0, ಕೆಪಿಸಿಎಲ್ ಹಸಿರು ಕಟ್ಟಡ, ಬೆಂಗಳೂರು.
14. ಎಲ್ಲಾ ಇಲಾಖಾ ಮುಖ್ಯಸ್ಥರು.
15. ಎಲ್ಲಾ ಪ್ರಾದೇಶಿಕ ಆಯುಕ್ತರು.
16. ಎಲ್ಲಾ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
17. ನಿವಾಸಿ ಆಯುಕ್ತರು, ಕರ್ನಾಟಕ ಭವನ, ನಂ.10, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ- 110011.
18. ಸರ್ಕಾರದ ಅಪರ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ (ಪ್ರಕರಣ ಸಂಖ್ಯೆ: ಸಿ.219/2025).
19. ರಾಜ್ಯಾಧ್ಯಕ್ಷರು, ಕರ್ನಾಟಕ ಸರ್ಕಾರಿ ನೌಕರರ ಸಂಘ, ಕಬ್ಬನ್ ಪಾರ್ಕ್, ಬೆಂಗಳೂರು.
20. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-12)/ ಸೇವೆಗಳು-1 ವಿಧಾನಸೌಧ.
21. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ (ಲೆಕ್ಕಪತ್ರ).
22. ಶಾಖಾ ರಕ್ಷಾ ಕಡತ/ ಬಿಡಿ ಪ್ರತಿಗಳು.

ಈ ಆದೇಶವನ್ನು ಸರ್ಕಾರದ ಅಧಿಕೃತ ಜಾಲತಾಣ https://dpar.karnataka.gov.in ರಲ್ಲಿ ವೀಕ್ಷಿಸಬಹುದು.